# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 62 (562) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಛಲವಾದಿ ಟಿ ನಾರಾಯಣಸ್ವಾಮಿ |
| ಉತ್ತರಿಸುವ ದಿನಾಂಕ | : | 08-12-2023 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಕಲ್ಯಾಣಕ್ಕಾಗಿ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಡಿ ಮೀಸಲಿಟ್ಟ ಅನುದಾನದಲ್ಲಿ ಎಷ್ಟು ಮೊತ್ತವನ್ನು ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕಾಗಿ ಬಳಕೆ ಮಾಡಲಾಗಿದೆ. (ಸಂಪೂರ್ಣ ಮಾಹಿತಿ ನೀಡುವುದು) | ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಯೋಜನೆಯಡಿ ಗ್ಯಾರಂಟಿ ಯೋಜನೆಗಳಿಗೆ ಒದಗಿಸಿರುವ ಅನುದಾನದ ವಿವರ ಈ ಕೆಳಗಿನಂತಿದೆ. (ರೂ. ಕೋಟಿಗಳಲ್ಲಿ) (see table below) |

**(ರೂ. ಕೋಟಿಗಳಲ್ಲಿ)**

| ಯೋಜನೆ | ಹಂಚಿಕೆ | | |
|---|---|---|---|
| | ಎಸ್.ಸಿ.ಎಸ್.ಪಿ | ಟಿ.ಎಸ್.ಪಿ | ಒಟ್ಟು |
| ಗೃಹಲಕ್ಷ್ಮಿ | 3,500 | 1,575 | 5,075 |
| ಅನ್ನಭಾಗ್ಯ | 1,955.65 | 823.85 | 2,779.50 |
| ಗೃಹಜ್ಯೋತಿ | 1,650 | 760 | 2,410 |
| ಶಕ್ತಿ | 560 | 252 | 812 |
| ಯುವನಿಧಿ | 47.50 | 20 | 67.50 |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಆ) | ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣಕ್ಕಾಗಿ ಮೀಸಲಿಟ್ಟ ಹಣವನ್ನು ಅನ್ಯ ಉದ್ದೇಶಕ್ಕಾಗಿ ಬಳಸುವುದು ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯನ್ನು ದುರ್ಬಳಕೆ ಮಾಡಿದಂತೆ ಆಗುವುದಿಲ್ಲವೇ ಹಾಗೂ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕಾಯ್ದೆಯ ಉಲ್ಲಂಘನೆಯಾಗುವುದಿಲ್ಲವೇ: | ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಅಧಿನಿಯಮ 2013 ಮತ್ತು ನಿಯಮಗಳು 2017ರಲ್ಲಿ ಪ.ಜಾತಿ/ ಪ.ಪಂಗಡದ ಜನರಿಗೆ ನೇರವಾಗಿ ಪ್ರಯೋಜನವಾಗುವ ಕಾರ್ಯಕ್ರಮಗಳಿಗೆ ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಅನುದಾನವನ್ನು ಹಂಚಿಕೆ ಮಾಡಿ ಅನುಷ್ಠಾನಗೊಳಿಸಲು ಅವಕಾಶವಿದೆ.<br>ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಅನುದಾನವನ್ನು ಪ.ಜಾತಿ/ ಪ.ಪಂಗಡದವರ ಅಭಿವೃದ್ಧಿಗೆ ವಿನಿಯೋಗಿಸುತ್ತಿರುವ ಕಾರಣ ಅನ್ಯ ಉದ್ದೇಶಕ್ಕಾಗಿ ಅನುದಾನ ಬಳಸಿರುವುದಿಲ್ಲ. ಆದ್ದರಿಂದ ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಕಾಯ್ದೆಯ ಉಲ್ಲಂಘನೆಯ ಪ್ರಶ್ನೆ ಉದ್ಭವಿಸುವುದಿಲ್ಲ. |
| ಇ) | 2023-24ನೇ ಸಾಲಿನಲ್ಲಿ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಡಿ ಪರಿಶಿಷ್ಟರ ಕಲ್ಯಾಣಕ್ಕಾಗಿ ಮೀಸಲಿಟ್ಟ ಸುಮಾರು 11 ಸಾವಿರ ಕೋಟಿಗಿಂತಲೂ ಅಧಿಕ ಮೊತ್ತವನ್ನು ರಾಜ್ಯ ಸರ್ಕಾರವು ಗ್ಯಾರಂಟಿ ಯೋಜನೆಗಳಿಗೆ ವರ್ಗಾಯಿಸಿರುವುದು ಈ ವರ್ಗದವರಿಗೆ ಅನ್ಯಾಯ ಮಾಡಿದಂತಾಗುವುದಿಲ್ಲವೇ: ಆ ವರ್ಗಗಳ ಶ್ರೇಯೋಭಿವೃದ್ಧಿಗೆ ಬಳಕೆ ಮಾಡಬೇಕಾದ ಅನುದಾನವನ್ನು ದುರ್ಬಳಕೆ ಮಾಡಿದಂತೆ ಆಗುವುದಿಲ್ಲವೇ: | ಗ್ಯಾರಂಟಿ ಯೋಜನೆಗಳಡಿ ಪ.ಜಾತಿ/ ಪ.ಪಂಗಡದವರಿಗೆ ಸದರಿ ಅನುದಾನವನ್ನು ಉಪಯೋಗಿಸುತ್ತಿರುವ ಕಾರಣ ಇದರಿಂದ ಯಾವುದೇ ಅನ್ಯಾಯವಾಗುವುದಿಲ್ಲ.<br>ಆದ್ದರಿಂದ, ಸದರಿ ಅನುದಾನದ ದುರ್ಬಳಕೆ ಎಂಬ ಪ್ರಶ್ನೆ ಉದ್ಭವಿಸುವುದಿಲ್ಲ. |

---2

| | | |
|---|---|---|
| ಈ) | 7ಡಿ ಕಾಯ್ದೆಯನ್ನು ತೆಗೆದು ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಡಿ ಮೀಸಲಿಟ್ಟ ಅನುದಾನವನ್ನು ಯಾವುದಕ್ಕೂ ವರ್ಗಾವಣೆ ಮಾಡುವುದಿಲ್ಲವೆಂದು ಆಶ್ವಾಸನೆ ನೀಡಿದ ಸರ್ಕಾರ 11 ಸಾವಿರ ಕೋಟಿಗಳಿಗೂ ಅಧಿಕ ಮೊತ್ತದಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಮಾಡುವುದಕ್ಕೆ ವರ್ಗಾವಣೆ ಮಾಡಿದ್ದು ದಲಿತರಿಗೆ ಮಾಡಿದ ಅನ್ಯಾಯವಲ್ಲವೇ; ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕೆ ಬಳಕೆ ಮಾಡಿರುವ ಈ ಹಣವನ್ನು ಮತ್ತೆ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಲ್ಲಿ ವಿನಿಯೋಗ ಮಾಡಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೇ? | ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಕಾಯ್ದೆಯ ಸೆಕ್ಷನ್ 7 (ಡಿ) ಅನ್ನು ಆಶ್ವಾಸನೆಯಂತೆ ಕೈಬಿಡಲು ತಿದ್ದುಪಡಿ ತರುವ ಬಗ್ಗೆ ಕ್ರಮವಹಿಸಲಾಗುತ್ತಿದೆ.<br><br>ಮೇಲ್ಕಂಡಂತೆ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅನುದಾನವನ್ನು ಪ.ಜಾತಿ/ ಪ.ಪಂಗಡದವರಿಗೆ ಮಾತ್ರ ಗ್ಯಾರಂಟಿ ಯೋಜನೆಗಳಿಗೆ ಬಳಕೆ ಮಾಡುತ್ತಿರುವ ಕಾರಣ ಇದರಿಂದ ಯಾವುದೇ ಅನ್ಯಾಯವಾಗುವುದಿಲ್ಲ. |

**ಸಕಇ 479 ಎಸ್‌ಎಲ್ ಪಿ 2023**

**(ಡಾ ಹೆಚ್.ಸಿ ಮಹದೇವಪ್ಪ)**
ಸಮಾಜ ಕಲ್ಯಾಣ ಸಚಿವರು